# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 253 | Pages. 2 | Date: 20-09-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 253 – ಪುಟಗಳು : 2 | 20-09-2026 | ಭಾನುವಾರ | Ph: 8762954248 | ದರ : ₹1


# ಮಳೆನಾಡಿಗೂ ಬರದ ಬಿಸಿ!

## ಸಕಲೇಶಪುರವನ್ನು ಬರಪೀಡಿತ ತಾಲೂಕು ಘೋಷಿಸಲು ಒತ್ತಾಯ: ಶಿವಲಿಂಗೇಗೌಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ, ಸೆ.19: ಬರದ ನಾಡಿನವರು ಮಳೆ ವೀಕ್ಷಣೆಗೆ ಸಕಲೇಶಪುರಕ್ಕೆ ಬರುತ್ತಿದ್ದರು. ಆದರೆ ಈ ಬಾರಿ ಸಕಲೇಶಪುರದಲ್ಲೇ ಮಳೆ ಕೊರತೆ ಉಂಟಾಗಿದೆ. ಬೆಳೆ ನಷ್ಟವಾಗಿದೆ. ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಹೀಗಾಗಿ ಸಕಲೇಶಪುರ ತಾಲ್ಲೂಕನ್ನು ಬರಪೀಡಿತ ತಾಲ್ಲೂಕು ಎಂದು ಘೋಷಣೆ ಮಾಡಬೇಕು, ಶೀಘ್ರದಲ್ಲೇ ಬರ ಪರಿಹಾರ ಒದಗಿಸಬೇಕು ಎಂದು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದು ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ಎಂ. ಶಿವಲಿಂಗೇಗೌಡ ಅವರು ಭರವಸೆ ನೀಡಿದರು.

ಸಕಲೇಶಪುರ ತಾಲ್ಲೂಕು ಮಟ್ಟದ ಪ್ರಜಾಸೇವಾ ಆಂದೋಲನದ ಸಭೆಯಲ್ಲಿ ಮಾತನಾಡಿದ ಕೆ. ಎಂ. ಶಿವಲಿಂಗೇಗೌಡ ಅವರು ಪಕ್ಷಾತೀತವಾಗಿ ಎಲ್ಲರೂ ಒಗ್ಗೂಡುವ ಮೂಲಕ ಬರ ಪರಿಹಾರಕ್ಕಾಗಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು. ತಾಲ್ಲೂಕಿನ ರೈತರ ಹಿತಕಾಪಾಡಬೇಕು ಎಂದರು.

ಸ್ವಕ್ಷೇತ್ರ ಅರಸೀಕೆರೆಯಲ್ಲಿ ಜನರ ಕುಂದುಕೊರತೆಗಳನ್ನು




ಆಲಿಸಿ, ಸ್ಥಳದಲ್ಲೇ ಬಗೆಹರಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ನಡೆಸುತ್ತಿದ್ದೆ. ಇದಕ್ಕೆ ಪೂರಕ ಎಂಬಂತೆ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಕೆಲವೇ ದಿನಗಳಲ್ಲಿ ಪ್ರಜಾಸೇವಾ ಆಂದೋಲನವನ್ನು ಘೋಷಿಸಿದಾಗ ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಲಿದೆ ಎಂದು ಅಭಿನಂದನೆ ಸಲ್ಲಿಸಿದ್ದೆ. ಪ್ರಜೆಗಳ ಸಂಕಷ್ಟಗಳನ್ನು ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತ ನೇರವಾಗಿ ಜನರ ಅಹವಾಲುಗಳನ್ನು ಸ್ವೀಕರಿಸಿ, ನಿಗದಿತ ಸಮಯದಲ್ಲಿ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಪ್ರಜಾಸೇವಾ ಕಾನೂನನ್ನು ಜಾರಿಗೊಳಿಸಿರುವುದು ಸ್ವತಂತ್ರ ಭಾರತದಲ್ಲೇ ಮೊದಲಾಗಿದೆ. ಸಮಸ್ಯೆ ನಿಮ್ಮದು ಪರಿಹಾರ ನಮ್ಮದು. ಈ ನಿಟ್ಟಿನಲ್ಲಿ ಸ್ಥಳೀಯರ ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲೇ ಪರಿಹರಿಸುವುದು ನಮ್ಮ ಉದ್ದೇಶವಾಗಿದೆ ಎಂದರು.

ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಒಂದಾಗಿ ಪ್ರಜೆಗಳ ಹಿತವನ್ನು ಕಾಪಾಡುವ ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಸಭೆಯಲ್ಲಿ ಸಕಲೇಶಪುರ-ಆಲೂರು-ಕಟ್ಟಾಯ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್. ಮಂಜುನಾಥ್, ಜಿಲ್ಲಾಧಿಕಾರಿ ಲತಾಕುಮಾರಿ, ಸಕಲೇಶಪುರದ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಮುರಳಿ ಮೋಹನ್ ಸೇರಿದಂತೆ ಹಿರಿಯ ಅಧಿಕಾರಿಗಳು, ಸ್ಥಳೀಯ ಮುಖಂಡರು ಮತ್ತಿತರರು ಉಪಸ್ಥಿತರಿದ್ದರು.




# ಸಹಾಯಧನದ ಚೆಕ್ ವಿತರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: 2025-26ನೇ ಸಾಲಿನ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ಹಾಗೂ ಪಶು ಪಾಲನಾ ಇಲಾಖೆ ವತಿಯಿಂದ ಅನುಷ್ಠಾನಗೊಳ್ಳುತ್ತಿರುವ ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆಯಡಿ 10+1 ಕುರಿ/ಮೇಕೆ ಘಟಕ ವಿತರಿಸುವ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಅರ್ಹ ಫಲಾನುಭವಿಗಳಿಗೆ ಸಹಾಯಧನದ ಚೆಕ್ ವಿತರಿಸಿದರು. ಈ ಸಂದರ್ಭದಲ್ಲಿ ನಿಗಮದ ಸಹಾಯಕ ನಿರ್ದೇಶಕ ಡಾ.ಪವನ್ ಕುಮಾರ್, ಇಲಾಖೆಯ ಸಹಾಯಕ ನಿರ್ದೇಶಕ ಡಾ.ತಾರನಾಥ್, ಮುಖ್ಯ ಪಶುವೈದ್ಯಾಧಿಕಾರಿ ಡಾ.ಮಧು ಬಿ.ಪಿ ಇದ್ದರು.

ನಂತರ ನಗರದ ಡೈರಿ ವೃತ್ತದಲ್ಲಿ ಮೊದಲಿಂದಲೂ ಇದ್ದ ಹೈ ಮಾಸ್ಟ್ ಲೈಟ್‌ನ್ನು ತೆರವುಗೊಳಿಸಲಾಗಿತ್ತು. ಇದರಿಂದ ರಾತ್ರಿ ವೇಳೆ ಬೆಳಕಿಲ್ಲದೆ ಸಾರ್ವಜನಿಕರು, ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ ಎಂಬ ದೂರಿನ ಹಿನ್ನೆಲೆಯಲ್ಲಿ ಮತ್ತೆ ದೀಪ ಅಳವಡಿಸುವ ಕಾಮಗಾರಿ ಆರಂಭವಾಗಿದ್ದು, ಅಲ್ಲಿಗೆ ಶಾಸಕರು ಭೇಟಿ ನೀಡಿ ಕಾಮಗಾರಿ ವೀಕ್ಷಿಸಿ ಶೀಘ್ರವೇ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

# ಹಸಿರುಭೂಮಿ ಪ್ರತಿಷ್ಠಾನದಿಂದ ನಗರದಲ್ಲಿ ಪರಿಸರ ಶ್ರಮದಾನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಸಿರುಭೂಮಿ ಪ್ರತಿಷ್ಠಾನದ ವತಿಯಿಂದ ನಗರದ ಸಾರ್ವಜನಿಕ ಗ್ರಂಥಾಲಯದ ಹಿಂಭಾಗದ ಮಿಯಾವಾಕಿ ಪುಟ್ಟಡವಿ ಹಾಗೂ ಮಹಿಳಾ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಪರಿಸರ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮಾತನಾಡಿದ ಹಸಿರುಭೂಮಿ ಪ್ರತಿಷ್ಠಾನದ ಅಧ್ಯಕ್ಷ ಸಿ.ಬಿ. ವೆಂಕಟೇಗೌಡ, "ವಿದ್ಯಾರ್ಥಿಗಳಲ್ಲಿ ಪರಿಸರ ಬದ್ಧತೆ ಮತ್ತು ಕಾಳಜಿ ಬೆಳೆಸುವ ಉದ್ದೇಶದಿಂದ ಪ್ರತಿಷ್ಠಾನವು ಕಾಲೇಜುಗಳ ಆವರಣದಲ್ಲಿ ಮಿಯಾವಾಕಿ ಪುಟ್ಟಡವಿ ಹಾಗೂ ಹಸಿರು ತೋಟಗಳನ್ನು ನಿರ್ಮಿಸುತ್ತಿದೆ. ಇವುಗಳನ್ನು ಕೇವಲ ನಿರ್ಮಿಸುವುದಷ್ಟೇ ಅಲ್ಲದೆ, ಸುಸ್ಥಿರವಾಗಿ ಪೋಷಿಸಿ ನಿರ್ವಹಿಸುವ ಜವಾಬ್ದಾರಿಯನ್ನು ಕಾಲೇಜು ಆಡಳಿತ ಮಂಡಳಿಗಳು ಬದ್ಧತೆಯಿಂದ ನಿಭಾಯಿಸಬೇಕು," ಎಂದು ತಿಳಿಸಿದರು.

ಪ್ರತಿಷ್ಠಾನದ ಉಪಾಧ್ಯಕ್ಷ ಹಾಗೂ 'ಹಸಿರುಸಿರಿ' ಸಂಚಾಲಕ ಪುರುಷೋತ್ತಮ್ ಮಾತನಾಡಿ, "ಮರಗಿಡಗಳು ಮಾನವಕುಲಕ್ಕೆ ಜೀವರಕ್ಷಕಗಳು. ಹಸಿರಿನಿಂದ ಕೂಡಿದ ಆರೋಗ್ಯಕರ ವಾತಾವರಣವು ನೆಲದ ಮೇಲೆಯೇ ಸ್ವರ್ಗವನ್ನು ಸೃಷ್ಟಿಸುತ್ತದೆ. ಗಿಡ-ಮರಗಳ ಆವರಣವನ್ನು ನಮ್ಮ ಮನೆ ಹಾಗೂ ಮಕ್ಕಳಂತೆ ಸ್ವಚ್ಛವಾಗಿಟ್ಟುಕೊಳ್ಳಬೇಕು. ಮಕ್ಕಳಂತೆ ಪ್ರೀತಿಯಿಂದ ಬೆಳೆಸಿದರೆ, ಅವು ನಮಗಿಂತಲೂ ಹೆಚ್ಚಿನ ಪ್ರತಿಫಲವನ್ನು ಸಮಾಜಕ್ಕೆ ನೀಡುತ್ತವೆ. ನೆಟ್ಟ ಸಸಿಗಳನ್ನು ಹಾಳುಮಾಡದೆ, ಅವುಗಳ ಸಂರಕ್ಷಣೆಗಾಗಿ ವಿದ್ಯಾರ್ಥಿಗಳ ಪಡೆಯನ್ನು ಕಟ್ಟಿ ಜಾಗೃತಿ ಮೂಡಿಸಬೇಕು," ಎಂದು ವಿನಂತಿಸಿದರು.

ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಬಾಲಕೃಷ್ಣ ಮಾತನಾಡಿ, "ಕಾಲೇಜಿನ ಅಂಗಳವು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗಟ್ಟಿಗೊಳಿಸುವ ತಾಣ. ಈ ಆವರಣದಲ್ಲಿರುವ ಮರಗಿಡಗಳನ್ನು ಜತನದಿಂದ ಕಾಪಾಡಲಾಗುವುದು. ಕಾಲೇಜಿನ 'ಇಕೋ ಕ್ಲಬ್' ಮೂಲಕ ವಿದ್ಯಾರ್ಥಿನಿಯರು ಹಾಗೂ ಉಪನ್ಯಾಸಕರಿಗೆ ಜವಾಬ್ದಾರಿ ಹಂಚಿಕೆ ಮಾಡಿ, ಅವರಲ್ಲಿ ಸಕ್ರಿಯ ಪರಿಸರ ಪ್ರಜ್ಞೆ ಬೆಳೆಸಲು ಶ್ರಮಿಸಲಾಗುವುದು," ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ರಾಜ್ಯಶಾಸ್ತ್ರ ಉಪನ್ಯಾಸಕಿ ರೂಪ, ಹಸಿರುಭೂಮಿ ಪ್ರತಿಷ್ಠಾನದ ಕಾರ್ಯದರ್ಶಿ ಗಿರಿಜಾಂಬಿಕ, ಪ್ರಮುಖರಾದ ಲೋಕೇಶ್, ವೇಣುಗೋಪಾಲ್, ಚಿನ್ನೇನಹಳ್ಳಿ ಸ್ವಾಮಿ, ಅಹಮದ್ ಹಗರೆ ಹಾಗೂ ಅಭಿ ಉಪಸ್ಥಿತರಿದ್ದು ಶ್ರಮದಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡರು.

# ಸಕಲೇಶಪುರವನ್ನು ಬರಪೀಡಿತ ತಾಲೂಕಾಗಿ ಘೋಷಿಸಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪ್ರಸಕ್ತ ವರ್ಷ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದರಿಂದ ಕಾಫಿ, ಅಡಕೆ, ಮೆಣಸು ಸೇರಿದಂತೆ ವಿವಿಧ ಬೆಳೆಗಳ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದ್ದು, ಸಕಲೇಶಪುರ ತಾಲೂಕನ್ನು ಬರಪೀಡಿತ ತಾಲೂಕಾಗಿ ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರಿಗೆ ಮನವಿ ಮಾಡಿದರು.

ಪಟ್ಟಣದಲ್ಲಿ ಶನಿವಾರ ನಡೆದ ತಾಲೂಕು ಮಟ್ಟದ ಪ್ರಜಾಸೇವಾ ಆಂದೋಲನ ಸಭೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಳೆ ಕೊರತೆಯಿಂದ ಕೆರೆ, ಹಳ್ಳ-ಕೊಳ್ಳಗಳಲ್ಲಿ ನೀರಿನ ಪ್ರಮಾಣ ಕುಸಿದಿದೆ. ಕಾಫಿ ಬೆಳೆಯ ನಿರ್ಣಾಯಕ ಹಂತದಲ್ಲಿ ನೀರಿನ ಅಭಾವ ಎದುರಾಗಿದ್ದು, ಬೆಳೆಗಾರರು ಆತಂಕದಲ್ಲಿದ್ದಾರೆ. ಭತ್ತ ಬೆಳೆಗಾರರೂ ವಿವಿಧ ಸಮಸ್ಯೆಗಳಿಂದ ಕೃಷಿಯಿಂದ ವಿಮುಖರಾಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

''ಎತ್ತಿನಹೊಳೆ ಸೇರಿದಂತೆ ವಿವಿಧ ಯೋಜನೆಗಳಿಗೆ ನೀರು ನೀಡುವ ಸಕಲೇಶಪುರದ ಜನರೇ ಇಂದು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದಾರೆ. ರೈತರು ಹಾಗೂ ಬೆಳೆಗಾರರ ಹಿತದೃಷ್ಟಿಯಿಂದ ಸಕಲೇಶಪುರ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ಅಗತ್ಯ ಪರಿಹಾರ ಒದಗಿಸಬೇಕು'' ಎಂದು ಸಚಿವರಿಗೆ ಮನವಿ ಮಾಡಿದರು.

ಪ್ರಜಾಸೇವಾ ಆಂದೋಲನದ ಮೂಲಕ ಸಾರ್ವಜನಿಕರ ಅರ್ಜಿಗಳನ್ನು ಕೇವಲ ಸ್ವೀಕರಿಸುವುದಷ್ಟೇ ಅಲ್ಲದೆ, ನಿಗದಿತ ಅವಧಿಯಲ್ಲಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿದಾಗ ಮಾತ್ರ ಕಾರ್ಯಕ್ರಮದ ಉದ್ದೇಶ ಸಾರ್ಥಕವಾಗುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

# ಸಮರ್ಪಕವಾಗಿ ತಲುಪದ ಏತ ನೀರಾವರಿ ಯೋಜನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹಿರೀಸಾವೆ-ಜುಟ್ಟನಹಳ್ಳಿ ಏತ ನೀರಾವರಿ ಯೋಜನೆಯಡಿ ಜನಿವಾರ ಕೆರೆಯಿಂದ ಏತ ನೀರಾವರಿ ಮೂಲಕ ಹಿರೀಸಾವೆ-ಶ್ರವಣಬೆಳಗೊಳ ಹೋಬಳಿಗಳ ವ್ಯಾಪ್ತಿಯ ಗ್ರಾಮಗಳ ಕೆರೆಗಳಿಗೆ ನೀರು ಹರಿಸಬೇಕಿದ್ದರೂ, ಕಳೆದ 15 ದಿನಗಳಿಂದ ಕೆಲವೇ ಕೆರೆಗಳಿಗೆ ನೀರು ಹರಿಯುತ್ತಿದ್ದು, ಯೋಜನೆಯಡಿ ಬರುವ ಬಹುತೇಕ ಕೆರೆಗಳಿಗೆ ನೀರು ತಲುಪಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಶನಿವಾರ ಕಾವೇರಿ ನೀರಾವರಿ ನಿಗಮ ಕಚೇರಿಯ ಮುಂಭಾಗ ಪ್ರತಿಭಟನೆ ನಡೆಸಿದರು

ಯೋಜನೆಯ ವ್ಯಾಪ್ತಿಯಲ್ಲಿರುವ ಎಲ್ಲ ಕೆರೆಗಳಿಗೂ ಅವುಗಳ ಅಚ್ಚುಕಟ್ಟು ಪ್ರದೇಶಕ್ಕೆ ಅನುಗುಣವಾಗಿ ನ್ಯಾಯಯುತವಾಗಿ ನೀರು ಹಂಚಿಕೆ ಮಾಡಬೇಕು. ಆದರೆ ಯೋಜನೆಯಡಿ ಬರುವ ಕೆರೆಗಳನ್ನು ಕಡೆಗಣಿಸಿ ಬೇರೆ ಕೆರೆಗಳಿಗೆ ನೀರು ಹರಿಸಿ, ಯೋಜನೆಯಡಿ ಬರುವ ಕೆರೆಗಳನ್ನು ಕಡೆಗಣಿಸಿರುವುದರಿಂದ ನೀರು ತಲುಪದ ಗ್ರಾಮಗಳ ರೈತರಿಗೆ ಅನ್ಯಾಯವಾಗಿದೆ ಎಂದು ಅವರು ಆರೋಪಿಸಿದರು.



ಏತ ನೀರಾವರಿ ನೀರನ್ನು ಅಧಿಕಾರಿಗಳು ಕ್ರಮಬದ್ಧವಾಗಿ ಹಾಗೂ ಅಚ್ಚುಕಟ್ಟು ಪ್ರದೇಶದ ಆಧಾರದ ಮೇಲೆ ಹಂಚಿಕೆ ಮಾಡದಿರುವುದರಿಂದ ಅಕ್ಕಪಕ್ಕದ ಗ್ರಾಮಗಳ ರೈತರ ನಡುವೆ ನೀರಿನ ವಿಚಾರವಾಗಿ ಅಸಮಾಧಾನ ಮತ್ತು ಘರ್ಷಣೆಯ ವಾತಾವರಣ ನಿರ್ಮಾಣವಾಗಿದೆ.

''ಎಲ್ಲರೂ ರೈತರೇ. ಎಲ್ಲ ಕೆರೆಗಳಿಗೂ ಸಮರ್ಪಕವಾಗಿ ನೀರು ಹಂಚಿಕೆ ಮಾಡಬೇಕು. ಯಾವುದೇ ಗ್ರಾಮದ ರೈತರಿಗೆ ಅನ್ಯಾಯವಾಗಬಾರದು. ಅಧಿಕಾರಿಗಳು ನೀರು ಹಂಚಿಕೆಯಲ್ಲಿ ತಾರತಮ್ಯ ಮಾಡಬಾರದು. ಯೋಜನೆಯಡಿ ಬರುವ ಕೆರೆಗಳಿಗೆ ಮೊದಲ ಆದ್ಯತೆ ನೀಡಿ ನೀರು ಹರಿಸಬೇಕು. ಇಲ್ಲದಿದ್ದರೆ, ನೀರಾವರಿ ಇಲಾಖೆ ಕಛೇರಿ ಮುಂಭಾಗ ನಮ್ಮ ಹಕ್ಕಿನ ನೀರಿಗಾಗಿ ಹೋರಾಟ ನಡೆಸುತ್ತೇವೆ'' ಎಂದು ಅವರು ಎಚ್ಚರಿಸಿದರು.

ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಹಿರಿಸಾವೆಯಲ್ಲಿ ನಡೆದ ಪ್ರತಿಭಟನೆ ವೇಳೆ ಎರಡು ದಿನದಲ್ಲಿ ನೀರು ಹರಿಸುತ್ತೇವೆ ಎಂದು ಆಶ್ವಾಸನೆ ನೀಡಿ ಇದುವರೆಗೆ ನೀರು ಹರಿಸಿರುವುದಿಲ್ಲ ಕೂಡಲೇ ನೀರು ಹಂಚಿಕೆಯಲ್ಲಿನ ಗೊಂದಲ ನಿವಾರಿಸಿ, ಯೋಜನೆಯಡಿ ಬರುವ ಎಲ್ಲ ಕೆರೆಗಳಿಗೂ ಸಮರ್ಪಕವಾಗಿ ನೀರು ಹರಿಸಬೇಕು. ಇಲ್ಲವಾದಲ್ಲಿ ಹೋರಾಟವನ್ನು ತೀವ್ರಗೊಳಿಸುವುದಾಗಿ ರೈತ ಮುಖಂಡರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಮಹಿಳಾ ಘಟಕದ ಅಧ್ಯಕ್ಷ ನಾಗರತ್ನಮ್ಮ, ಜಿಲ್ಲಾ ಕಾರ್ಯದರ್ಶಿ ಎಂ.ಎಲ್. ಹರೀಶ್, ತಾಲೂಕು ಅಧ್ಯಕ್ಷ ರಾಮಚಂದ್ರ, ತಾಲೂಕು ಗೌರವಾಧ್ಯಕ್ಷ ಸೋಮೇಗೌಡ, ಉಪಾಧ್ಯಕ್ಷ ಕೆ.ಎಂ. ಮುರಳಿ ಗೌಡ, ಕಾರ್ಯದರ್ಶಿ ಗೋವಿಂದ, ರೈತ ಮುಖಂಡರಾದ ಕುಮಾರ್ ಹೊಸೂರು, ರಮೇಶ್, ರಂಗಸ್ವಾಮಿ, ಶಿವರಾಮು, ಮಂಜು ಹಾಗೂ ಪುಟ್ಟಸ್ವಾಮಿ ಸೇರಿದಂತೆ ಹಲವು ರೈತರು ಭಾಗವಹಿಸಿದ್ದರು.

# ಸಂಜೆ 6 ಗಂಟೆ ವರೆಗೆ ನಡೆದ ಪ್ರಜಾ ಸೇವಾ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ : ಶ್ರೀಮಂತರ ನಾಡೆಂದು ಅಂದುಕೊಂಡಿದ್ದ ಸಕಲೇಶಪುರದಲ್ಲಿ ಬಡವರೇ ನನಗೆ ಜಾಸ್ತಿ ಕಾಣುತ್ತಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಲಿಂಗೇಗೌಡ ಹೇಳಿದರು.

ಪ್ರಜಾ ಸೇವಾ ಆಂದೋಲನದ ಸಮಾರೋಪ ಉದ್ದೇಶಿಸಿ ಮಾತನಾಡ ಇವತ್ತು ರೈತರು ಹಾಗೂ ಜನಸಾಮಾನ್ಯರ ಸಮಸ್ಯೆ ಬಗೆಹರಿಸಲು ವಿನೂತನ ಕಾರ್ಯಕ್ರಮ ಮಾಡಲಾಗಿದೆ. ಈ ಕಾರ್ಯಕ್ರಮದಲ್ಲಿ 500 ಕ್ಕೂ ಹೆಚ್ಚು ಅರ್ಜಿಗಳನ್ನು ವಿಲೇವಾರಿ ತಹಸೀಲ್ದಾರ್ ಕಚೇರಿ ಭ್ರಷ್ಟಾಚಾರದ ಗೂಡಾಗಿರುವ ಆರೋಪ ಕೇಳಿ ಬಂದಿದ್ದು ಸಿಬ್ಬಂದಿಗಳು ತಕ್ಷಣ ತಮ್ಮ ವರ್ತನೆಗಳನ್ನು ಬದಲಾವಣೆ ಮಾಡಿಕೊಳ್ಳಬೇಕು.

ಶಿರಸ್ತೇದಾರ್ ರವಿಶಂಕರ್ ತರಾಟೆಗೆ ತೆಗೆದುಕೊಂಡ ಸಚಿವರು.. ಜನರನ್ನು ನೋಡಿ ಹೊಟ್ಟೆ ಉರಿಯುತ್ತದೆ. ದೊಡ್ಡ ದೊಡ್ಡ ಶ್ರೀಮಂತರು ಆರಾಮಾಗಿ ಇದ್ದಾರೆ. ಬಡವರು ಪರದಾಡುತ್ತಿದ್ದಾರೆ. ಬಡವರ ಕೆಲಸ ಮಾಡಿಕೊಡದಿದ್ದರೆ ಶಾಪ ತಗಳುತ್ತದೆ. ಈ ಹಿನ್ನಲೆಯಲ್ಲಿ ಸಿಬ್ಬಂದಿಗಳು ಸರಿಯಾಗಿ ಕೆಲಸ ಮಾಡಬೇಕು. ತಾಲೂಕು ಪಂಚಾಯತಿ ಕಾರ್ಯ ವೈಖರಿ ಸಹ ತೃಪ್ತಿಯಾಗಿಲ್ಲ. ಕಾನೂನು ವ್ಯಾಪ್ತಿ ಒಳಗಿನ ಸಮಸ್ಯೆ ಗಳನ್ನು ಬಗೆಹರಿಸಿ ಕೊಡಲು ಮೊದಲು ಮುಂದಾಗಬೇಕು.ಸರ್ವೆ ಇಲಾಖೆಯ ಸರಿಯಾಗಿ ಕೆಲಸ ಮಾಡಬೇಕು. ದುರಸ್ತು ಅರ್ಜಿಗಳು ಹೆಚ್ಚು ಎಲ್ಲವನ್ನು ಜಿಲ್ಲಾಧಿಕಾರಿಗಳು ಬಗೆಹರಿಸಲು ಮುಂದಾಗಬೇಕು.

# ಶಿಕ್ಷಕರು ಭವಿಷ್ಯ ರೂಪಿಸುವ ಶಿಲ್ಪಿಗಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ಜ್ಞಾನ, ಸಂಸ್ಕಾರ, ಮಾನವೀಯ ಮೌಲ್ಯ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವ ಮೂಲಕ ದೇಶದ ಭವಿಷ್ಯ ರೂಪಿಸುವ ಶಿಲ್ಪಿಗಳು ಎಂದು ಸಂಸದ ಶ್ರೇಯಸ್ ಎಂ.ಪಟೇಲ್ ಹೇಳಿದರು.

ಹಾಸನ ಜಿಲ್ಲಾ ಅನುದಾನ ರಹಿತ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳ ಒಕ್ಕೂಟದ ವತಿಯಿಂದ ನಗರದ ಆದಿಚುಂಚನಗಿರಿ ಸಮುದಾಯಭವನದಲ್ಲಿಂದು ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಿಕ್ಷಣವೆಂದರೆ ಕೇವಲ ಪುಸ್ತಕದ ಜ್ಞಾನ ನೀಡುವುದಲ್ಲ, ವಿದ್ಯಾರ್ಥಿಯ ವ್ಯಕ್ತಿತ್ವ ರೂಪಿಸುವ ಮಹತ್ತರ ಕಾರ್ಯ. ವೈದ್ಯರು, ಇಂಜಿನಿಯರ್‌ಗಳು, ವಿಜ್ಞಾನಿಗಳು, ರೈತರು, ಅಧಿಕಾರಿಗಳು, ಉದ್ಯಮಿಗಳು, ಜನಪ್ರತಿನಿಧಿಗಳೂ ಸೇರಿದಂತೆ ಸಮಾಜದ ಪ್ರತಿಯೊಬ್ಬರ ಬದುಕಿನಲ್ಲಿಯೂ ಒಬ್ಬ ಶಿಕ್ಷಕರ ಮಾರ್ಗದರ್ಶನ ಇರುತ್ತದೆ ಎಂದರು.

ಅನುದಾನ ರಹಿತ ಖಾಸಗಿ ಶಾಲೆಗಳ ಶಿಕ್ಷಕರು, ಅನೇಕ ಸವಾಲುಗಳ ನಡುವೆಯೂ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಜಿಲ್ಲೆಯ ಶಿಕ್ಷಣ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸಲು ಸರ್ಕಾರ, ಜನಪ್ರತಿನಿಧಿಗಳು, ಶಾಲಾ ಆಡಳಿತ ಮಂಡಳಿಗಳು, ಶಿಕ್ಷಕರು ಹಾಗೂ ಪೋಷಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಸಮಾಜ ನಿರ್ಮಾಣಕ್ಕೆ ಅಮೂಲ್ಯ: ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಮಾತನಾಡಿ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ, ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ಉತ್ತಮ ವ್ಯಕ್ತಿತ್ವ ರೂಪಿಸುವ ಮಾರ್ಗದರ್ಶಕರು ಎಂದರು.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರುವ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕರ ಮಾರ್ಗದರ್ಶನದಿಂದ ಅನೇಕ ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಸಾಧನೆ ಮಾಡಿದ್ದಾರೆ, ಸಮಾಜದಲ್ಲಿ ಶಿಸ್ತು, ಸಂಸ್ಕಾರ ಮತ್ತು ಮಾನವೀಯ ಮೌಲ್ಯ ಬೆಳೆಸುವಲ್ಲಿ ಶಿಕ್ಷಕರ ಕೊಡುಗೆ ಅಪಾರ ಎಂದರು.

ಶಿಕ್ಷಕರು ತಮ್ಮ ವೃತ್ತಿಯನ್ನು ಸೇವಾ ಮನೋಭಾವದಿಂದ ನಿರ್ವಹಿಸುತ್ತಿರುವುದು ಶ್ಲಾಘನೀಯ, ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಎಲ್ಲರೂ ಸಹಕರಿಸಬೇಕು, ಇಂದಿನ ತಂತ್ರಜ್ಞಾನ ಯುಗದಲ್ಲಿ ಶಿಕ್ಷಣ ಕ್ಷೇತ್ರವೂ ಹಲವು ಬದಲಾವಣೆ ಕಾಣುತ್ತಿದೆ. ಬದಲಾಗುತ್ತಿರುವ ಕಾಲಘಟ್ಟಕ್ಕೆ ಅನುಗುಣವಾಗಿ ಶಿಕ್ಷಕರು ಹೊಸ ಬೋಧನಾ ವಿಧಾನ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಹಾಸನ-ಕೊಡುಗು ಶಾಖಾ ಮಠದ ಪೂಜ್ಯಶ್ರೀ ಶಂಭುನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು. ಈ ವೇಳೆ ವಿವಿಧ ಶಾಲೆಗಳ ಶಿಕ್ಷಕರನ್ನು ಗೌರವಿಸಿ ಅಭಿನಂದಿಸಲಾಯಿತು. ಶಾಲಾ ಒಕ್ಕೂಟದ ಅಧ್ಯಕ್ಷ ಶಿವರಾಮೇಗೌಡ, ಕಾರ್ಯದರ್ಶಿ ಟೈಮ್ಸ್ ಗಂಗಾಧರ್ ಬಿ.ಕೆ ಹಾಗೂ ಪದಾಧಿಕಾರಿಗಳಿದ್ದರು.

# ಶ್ರಾವಣ ಮಾಸದ ಬಸವ ಚಿಂತನ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಬಸವಣ್ಣನವರು ಆಡಂಬರದ ಪೂಜೆಯ ಬದಲು ಸತ್ಯ, ಪ್ರಾಮಾಣಿಕತೆ ಮತ್ತು ಸತ್ಕಾಯಕಕ್ಕೆ ಅವರು ಮಹತ್ವ ನೀಡಿದರು. ಮನು?ನು ಕಳ್ಳತನ, ಹಿಂಸೆ, ಸುಳ್ಳು, ದ್ವೇಷ, ಅಹಂಕಾರ ಮತ್ತು ಪರನಿಂದೆಗಳಿಂದ ದೂರವಿರಬೇಕು ಎಂದು ಬೋಧಿಸಿದ್ದಾರೆ ಎಂದು ಸೀಗೆನಾಡಿನ ಮಳೆಮಲ್ಲೇಶ್ವರ ಬೆಟ್ಟದ ಶ್ರೀ ಶ್ರೀ ನಂದೀಶ್ವರ ಶಿವಾಚಾರ್ಯ ಸ್ವಾಮೀಜಿಯವರು ಅಭಿಪ್ರಾಯಪಟ್ಟರು.



ಅವರು ಹಾಸನದ ಬಸವಕೇಂದ್ರ ಮತ್ತು ಬಸವ ಸಮಿತಿ ವತಿಯಿಂದ ನಗರದ ಯುನೈಟೆಡ್ ಅಕಾಡೆಮಿಯ ಜ್ಞಾನ ಮಂಟಪದಲ್ಲಿ ಹಮ್ಮಿಕೊಂಡಿದ್ದ ಶ್ರಾವಣ ಮಾಸದ ಚಿಂತನ ಕಾರ್ಯಕ್ರಮ ಮತ್ತು ಸನ್ಮಾನ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಬಸವಣ್ಣನವರು ಹೊರಗಿನ ಆಡಂಬರಕ್ಕಿಂತ ಒಳಗಿನ ಶುದ್ಧತೆಗೆ ಹೆಚ್ಚಿನ ಮಹತ್ವ ನೀಡಿದರು. ಮನುಷ್ಯನ ದೇಹ ಮತ್ತು ಮನಸ್ಸು ಪವಿತ್ರವಾಗಿದ್ದರೆ ಅದೇ ನಿಜವಾದ ದೇವಾಲಯ ಎಂಬುದು ಇದರ ಅರ್ಥ. ಇಂತಹ ನಡತೆಯುಳ್ಳ ಜನರಿಂದ ಕೂಡಿದ ನೈತಿಕ ಮತ್ತು ಶಾಂತಿಯುತ ಸಮಾಜವನ್ನು ಅವರು ಬಯಸಿದರು. ಅಕ್ಕಮಹಾದೇವಿ, ನೀಲಾಂಬಿಕೆ, ಗಂಗಾಂಬಿಕೆ ಮುಂತಾದ ಶರಣೆಯರ ಉಪಸ್ಥಿತಿ ಇದಕ್ಕೆ ಸಾಕ್ಷಿಯಾಗಿದೆ. ತನು ಸೇವೆಗೆ, ಮನ ಶುದ್ಧ ಭಾವನೆಗೆ, ಧನ ಸಮಾಜದ ಒಳಿತಿಗೆ ಬಳಕೆಯಾಗಬೇಕು. ಸ್ವಾರ್ಥಕ್ಕಾಗಿ ಬದುಕದೆ, ಕಾಯಕದ ಮೂಲಕ ಸಂಪಾದಿಸಿ, ದಾಸೋಹದ ಮೂಲಕ ಸಮಾಜಕ್ಕೆ ಅರ್ಪಿಸುವುದೇ ಸಾರ್ಥಕ ಜೀವನ. ಬಸವಣ್ಣನವರ ದೃಷ್ಟಿಯಲ್ಲಿ ದಾಸೋಹವು ದಾನಕ್ಕಿಂತ ವಿಶಾಲವಾದುದು; ಅದು ಸೇವೆ, ಸಮಾನತೆ, ಹಂಚಿಕೆ ಮತ್ತು ಮಾನವೀಯತೆಯ ಜೀವನತತ್ತ್ವವಾಗಿದೆ. ಬಸವಣ್ಣನವರು ದೇವಾಲಯ ಕಟ್ಟಲು ಸಾಧ್ಯವಿಲ್ಲದ ಸಾಮಾನ್ಯ ಮನು?ನಿಗೂ ತನ್ನ ದೇಹವೇ ದೇವಾಲಯ ಎಂದು ಹೇಳುತ್ತಾರೆ. ದೇವರನ್ನು ಕಾಣಲು ಹಣ, ಸಂಪತ್ತು ಅಥವಾ ದೊಡ್ಡ ದೇವಾಲಯದ ಅವಶ್ಯಕತೆ ಇಲ್ಲ; ಶುದ್ಧ ಮನಸ್ಸು ಮತ್ತು ಸತ್ಕಾರ್ಯವೇ ಮುಖ್ಯ ಎಂಬ ಸಂದೇಶ ಸಾರಿದರು ಎಂದರು.

ಪ್ರಧಾನ ಭಾಷಣಕಾರರಾಗಿ ಆಗಮಿಸಿದ್ದ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ರಾಜ್ಯಾಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ಮಾತನಾಡಿ ಬಸವಣ್ಣನವರು ಕೇವಲ ಭಕ್ತಿಯನ್ನ?ೇ ಬೋಧಿಸಿದವರಲ್ಲ; ಸಮಾನತೆ, ಕಾಯಕ, ದಾಸೋಹ, ಮಾನವೀಯತೆ ಮತ್ತು ಸಾಮಾಜಿಕ ನ್ಯಾಯದ ಆಧಾರದ ಮೇಲೆ ಹೊಸ ಸಮಾಜವನ್ನು ನಿರ್ಮಿಸಲು ಪ್ರಯತ್ನಿಸಿದ ಮಹಾನ್ ಸಮಾಜ ಸುಧಾರಕರು. ಅವರ ವಚನಗಳಲ್ಲಿ ಅವರು ಬಯಸಿದ ಸಮಾಜದ ಸ್ಪ? ಚಿತ್ರಣ ದೊರೆಯುತ್ತದೆ. ಬಸವಣ್ಣನವರು ಕಟ್ಟಬಯಸಿದ ಸಮಾಜವು ಜಾತಿ-ಭೇದವಿಲ್ಲದ, ಮೇಲು-ಕೀಳುಗಳಿಲ್ಲದ, ಸ್ತ್ರೀ-ಪುರು? ಸಮಾನತೆಯ, ಕಾಯಕಕ್ಕೆ ಗೌರವ ನೀಡುವ, ದಾಸೋಹವನ್ನು ಪಾಲಿಸುವ, ಸತ್ಯ ಮತ್ತು ಮಾನವೀಯತೆಯಿಂದ ಕೂಡಿದ ಸಮಾಜವಾಗಿತ್ತು. ಅಲ್ಲಿ ರೈತ, ಕಮ್ಮಾರ, ಕುಂಬಾರ, ಚಮ್ಮಾರ, ನೇಕಾರ, ಮಹಿಳೆ, ಜ್ಞಾನಿ? ಎಲ್ಲರೂ ತಮ್ಮ ಅನುಭವಗಳನ್ನು ಮುಕ್ತವಾಗಿ ಹಂಚಿಕೊಳ್ಳುತ್ತಿದ್ದರು. ಇದರಿಂದ ವಿಚಾರ ಸ್ವಾತಂತ್ರ್ಯ ಮತ್ತು ಸಮಾನತೆಯ ಸಮಾಜದ ಕಲ್ಪನೆ ಮೂಡಿತು. ವಿವಿಧ ಕಾಯಕ ಮಾಡುವ ಜನರನ್ನು ಒಂದೆಡೆ ಸೇರಿಸಿ ವಿಚಾರ ವಿನಿಮಯಕ್ಕೆ ಅವಕಾಶ ನೀಡಿದರು. ಅನುಭವ ಮಂಟಪವು ಜಾತಿ, ವರ್ಗ ಮತ್ತು ಲಿಂಗದ ಭೇದಗಳನ್ನು ಮೀರಿ ಚರ್ಚೆ ನಡೆಸುವ ವೇದಿಕೆಯಾಯಿತು. ಅವರ ಚಿಂತನೆಯ ಸಾರವನ್ನು ''ಕಾಯಕವೇ ಕೈಲಾಸ'' ಮತ್ತು ''ದಾಸೋಹ'' ಎಂಬ ಎರಡು ಪ್ರಮುಖ ತತ್ವಗಳಲ್ಲಿ ಕಾಣಬಹುದು. ಬಸವಣ್ಣನವರ ವಚನಗಳು 12ನೇ ಶತಮಾನದಲ್ಲ?ೇ ಅಲ್ಲದೆ, ಇಂದಿನ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಸಮಾಜ ನಿರ್ಮಾಣಕ್ಕೂ ದಾರಿದೀಪವಾಗಿವೆ. ಬಸವಣ್ಣನವರು ಜನರನ್ನು ಹುಟ್ಟಿನ ಆಧಾರದ ಮೇಲೆ ಮೇಲು-ಕೀಳು ಎಂದು ವಿಭಜಿಸುವುದನ್ನು ವಿರೋಧಿಸಿದರು. ಮನು?ನ ಗುಣ ಮತ್ತು ಕಾಯಕವೇ ಅವನ ಮೌಲ್ಯವನ್ನು ನಿರ್ಧರಿಸಬೇಕು ಎಂದು ಸಾರಿದರು. ಬಸವಣ್ಣನವರ ದೃಷ್ಟಿಯಲ್ಲಿ ಭಕ್ತಿ ಎಂದರೆ ಕೇವಲ ಪೂಜೆ ಮಾಡುವುದು ಅಲ್ಲ. ನಿಜವಾದ ಭಕ್ತಿ ಒಳ್ಳೆಯ ನಡತೆ ಮತ್ತು ಸತ್ಯ ಜೀವನದಲ್ಲಿ ವ್ಯಕ್ತವಾಗಬೇಕು. ಬಸವಣ್ಣನವರ ಕಾಲದಲ್ಲಿ ಮಹಿಳೆಯರಿಗೆ ಅನೇಕ ಸಾಮಾಜಿಕ ನಿರ್ಬಂಧಗಳಿದ್ದವು. ಆದರೆ ಬಸವಣ್ಣನವರು ಮಹಿಳೆಯರಿಗೂ ಪುರು?ರ?ೇ ಆಧ್ಯಾತ್ಮಿಕ ಹಾಗೂ ಸಾಮಾಜಿಕ ಸ್ಥಾನಮಾನ ನೀಡಿದರು ಎಂದರು.




ಹಾಸನದ ಬಸವಕೇಂದ್ರದ ಅಧ್ಯಕ್ಷ ಯು.ಎಸ್. ಬಸವರಾಜ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ತಾನು ದುಡಿದು ಗಳಿಸಿದುದರಲ್ಲಿ ಅಗತ್ಯಕ್ಕಿಂತ ಹೆಚ್ಚಿನದನ್ನು ಸಮಾಜದ ಒಳಿತಿಗಾಗಿ ಹಂಚಿಕೊಳ್ಳಬೇಕು. ಸ್ವಾರ್ಥವಿಲ್ಲದೆ ಇತರರ ಹಿತಕ್ಕಾಗಿ ಬದುಕುವುದು ಬಸವಣ್ಣನವರ ದಾಸೋಹದ ತತ್ವ. ಬಸವಣ್ಣನವರ ಸಮಾಜದಲ್ಲಿ ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ದುಡಿದು ಬದುಕಬೇಕು. ಯಾವುದೇ ಕೆಲಸ ಮೇಲು-ಕೀಳು ಎಂಬ ಭಾವನೆ ಇರಬಾರದು. ''ಕಾಯಕವೇ ಕೈಲಾಸ'' ಈ ಮಾತಿನ ಮೂಲಕ ಬಸವಣ್ಣನವರು ದುಡಿಮೆಯೇ ದೇವರ ಆರಾಧನೆ ಎಂಬ ಸಂದೇಶ ನೀಡಿದರು. ಕೆಲಸ ಮಾಡುವವನನ್ನು ಕೀಳಾಗಿ ಕಾಣದೆ, ಅವನ ಕಾಯಕಕ್ಕೆ ಗೌರವ ನೀಡಬೇಕು ಎಂಬುದು ಅವರ ಆಶಯವಾಗಿತ್ತು ಎಂದರು.

ಕಾರ್ಯಕ್ರಮದಲ್ಲಿ ಯುನೈಟೆಡ್ ಅಕಾಡೆಮಿಯ ಆರ್. ಇ. ಸೋಮಶೇಖರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಾಯಕರಾದ ಶಿವನಂಜೇಗೌಡ, ರತ್ನ ಸೋಮಶೇಖರ್, ದೇವಿರಮ್ಮ, ಸವರ್ಣ ರಾಮಚಂದ್ರ ಅವರುಗಳು ವಚನ ಗಾಯನ ನಡೆಸಿಕೊಟ್ಟರು. ವೇದಿಕೆಯಲ್ಲಿ ವೃತ್ತಿಯಿಂದ ನಿವೃತ್ತಿ ಜೀವನಕ್ಕೆ ಕಾಲಿಟ್ಟ ಶಿಕ್ಷಣ ಇಲಾಖೆಯ ಪಾಲಾಕ್ಷಮ್ಮ ಮೋಹನ್ ರಾಜ್, ದೇವಿರಮ್ಮ ಹರೀಶ್, ಬಸವರಾಜ್, ವಿಜಯ ಶಿವರುದ್ರಪ್ಪ, ಪುಟ್ಟಪ್ಪ, ಚಂದ್ರಮೌಳಿ, ಕೆ.ಎಂ. ಪ್ರಕಾಶ್, ಮಲ್ನಾಡ್ ಕಾಲೇಜಿನ ಅಧೀಕ್ಷಕ ಕಟ್ಟಾಯ ಶಿವಕುಮಾರ್, ನಿವೃತ್ತ ಪ್ರಾಂಶುಪಾಲೆ ಜಯಶೀಲ, ಆಕಾಶವಾಣಿ ಮುಖ್ಯಸ್ಥ ವಿಜಯ ಅಂಗಡಿ, ಮಹಾನಗರ ಪಾಲಿಕೆ ಅಭಿಯಂತರರಾದ ಮಂಜುನಾಥ್ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸಕ ಡಾ. ಪ್ರೊ. ತಿಮ್ಮೇಶ್, ಡಾ. ಗುರುರಾಜ್ ಯಲಗಚ್ಚಿನವರ್, ಅಖಿಲ ಭಾರತೀಯ ವೀರಶೈವ ಮಹಾಸಭಾದ ತಾಲ್ಲೂಕು ಅಧ್ಯಕ್ಷೆ ಮಮತಾ ಪಾಟೀಲ, ಭಾರತ್ ಸ್ಕೌಟ್ಸ್ ಗೈಡ್ಸ್ ಹಾಸನ ಜಿಲ್ಲಾ ಉಪಾಧ್ಯಕ್ಷೆ ಎಂ.ಬಿ. ಗಿರಿಜಾಂಬಿಕ, ಲೆಕ್ಕಪರಿಶೋಧಕ ಎಸ್.ಎನ್. ಜಗದೀಶಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಇಡಿ ದಾಳಿ ಖಂಡಿಸಿ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮನೆ, ಕಚೇರಿ ಮೇಲೆ ಇ.ಡಿ ದಾಳಿ ಖಂಡಿಸಿ, ಜನಪರ ನಾಯಕನಿಗೆ ನೈತಿಕ ಬೆಂಬಲ ಸೂಚಿಸಿ, ಜಿಲ್ಲಾ ವಾಲ್ಮೀಕಿ ಸಮಾಜದ ಅಧ್ಯಕ್ಷ ಮಧುನಾಯಕ ಅವರ ನೇತೃತ್ವದಲ್ಲಿ, ಸಂವಿಧಾನ ಸಂರಕ್ಷಣಾ ವೇದಿ ಹಾಗೂ ದಲಿತ ಹಾಗೂ ಜನಪರ ಸಂಘಟನೆಗಳಿಂದ ನಗರದಲ್ಲಿಂದು ಪ್ರತಿಭಟನೆ ನಡೆಸಲಾಯಿತು.

ನಗರದ ಡಿಸಿ ಕಚೇರಿ ಎದುರಿನ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಮುಂಭಾಗ ಕೇಂದ್ರ ಬಿಜೆಪಿ ಸರ್ಕಾರ ಮತ್ತು ಇಡಿ ವಿರುದ್ಧ ಘೋಷಣೆ ಕೂಗುವ ನಾಮಫಲಕ ಹಿಡಿದು ಪ್ರತಿಭಟನೆ ನಡೆಸಿ ನಂತರ ಡಿಸಿ ಕಚೇರಿಗೆ ಆಗಮಿಸಿ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಮಧುನಾಯಕ, ನಮ್ಮ ನಾಯಕರಾದ ಸತೀಶ್ ಜಾರಕಿಹೊಳಿ ಅವರು ಹಾಗೂ ಎಸ್‌ಟಿ ಸಮುದಾಯದ ನಾಯಕರನ್ನು ಗುರಿಯಾಗಿಸಿ ದಾಳಿ ಮಾಡಿಸುತ್ತಿರುವುದು ರಾಜಕೀಯ ಪ್ರೇರಿತ ಎಂದು ಖಂಡಿಸಿದರು. ಇದಕ್ಕೆಲ್ಲ ಕೇಂದ್ರ ಬಿಜೆಪಿ ಸರ್ಕಾರದ ಕುಮ್ಮಕ್ಕು ಕಾರಣ. ಬಿಜೆಪಿಯಲ್ಲೇ ಅನೇಕ ಭ್ರಷ್ಟರಿದ್ದರೂ, ಅವರನ್ನು ಬಿಟ್ಟು ದಲಿತ ನಾಯಕರನ್ನೇ ಗುರಿಯಾಗಿ ದಾಳಿ ಮಾಡಲಾಗುತ್ತಿದೆ ಎಂದು ದೂರಿದರು. ಬಿಜೆಪಿಯ ರಾಜಕೀಯ ದುರುದ್ದೇಶ ಹೀಗೆಯೇ ಮುಂದುವರಿದರೆ ಮುಂದಿನ ದಿನಗಳಲ್ಲಿ ವಾಲ್ಮೀಕಿ ತಕ್ಕಪಾಠ ಕಲಿಸಲಾಗುವುದು, ಇಡಿ ತನ್ನ ದುರುದ್ದೇಶದ ದಾಳಿ ಮುಂದುವರಿಸಿದರೆ ಇಡಿ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿದರು.

ಬಳಿಕ ಕಾಂಗ್ರೆಸ್ ಮುಖಂಡರಾದ ಶೇಷೇಗೌಡ, ಎಸ್.ಮಂಜುನಾಥ್ ಶರ್ಮಾ, ಹಿಮ್ಸ್ ನಾಮನಿರ್ದೇಶನ ಸದಸ್ಯ ರವೀಶ್ ಬಸವಾಪುರ ಮಾತನಾಡಿ, ಸತೀಶ್ ಜಾರಕಿಹೊಳಿ ಅವರು ಮೂರು ದಶಕಗಳ ಹಿಂದೆಯೇ ಉದ್ಯಮ ಕ್ಷೇತ್ರದಲ್ಲಿ ತೊಡಗಿಸಿಕೊಂಡು, ಬಳಿಕ ರಾಜಕೀಯ ಪ್ರವೇಶಿಸಿದವರು. ಶೋಷಿತ ಸಮುದಾಯಗಳ ಜನರು ಉದ್ಯಮಿಗಳಾಗಬೇಕೆಂಬ ಆಶಯದೊಂದಿಗೆ ಸಂಘ-ಸಂಸ್ಥೆ ಕಟ್ಟಿಕೊಂಡು ಸಾಮಾಜಿಕ ಹೋರಾಟಗಳಲ್ಲಿ ತೊಡಗಿಸಿಕೊಂಡಿದ್ದಾರೆ.

ಡಾ.ಬಿ.ಆರ್. ಅಂಬೇಡ್ಕರ್ ಸೇರಿದಂತೆ ವಿವಿಧ ದಾರ್ಶನಿಕರ ಸಮಾನತೆಯ ಆಶಯ ಹಾಗೂ ಸಂವಿಧಾನದ ಮೌಲ್ಯಗಳನ್ನು ಜನರಲ್ಲಿ ಬಿತ್ತುವ ನಿಟ್ಟಿನಲ್ಲಿ ಪ್ರಗತಿಪರ ಸಂಘಟನೆಗಳೊಂದಿಗೆ ಕಾರ್ಯನಿರ್ವಹಿಸಿದ್ದಾರೆ. ಇಂಥ ನಾಯಕರ ಮೇಲೆ ರಾಜಕೀಯ ದುರುದ್ದೇಶದಿಂದ ಇಡಿ ಮೂಲಕ ತೊಂದರೆ ಕೊಡುವುದು ಸಲ್ಲದು, ಇದು ನಿಲ್ಲಬೇಕು ಎಂದು ಒತ್ತಾಯಿಸಿದರು.

ಸತೀಶ್ ಜಾರಕಿಹೊಳಿ ಅವರು ಯಾವುದೇ ತಪ್ಪು ಮಾಡಿಲ್ಲ, ಅವರ ಕಾನೂನಾತ್ಮಕ ಹೋರಾಟಕ್ಕೆ ನಮ್ಮ ನೈತಿಕ ಬೆಂಬಲ ಇದೆ ಎಂದು ಘೋಷಿಸಿದರು. ಈ ಮೂಲಕ ಸತೀಶ್ ಜಾರಕಿಹೊಳಿ ಅವರನ್ನು ರಾಜಕೀಯವಾಗಿ ಮುಗಿಸುವ ಹುನ್ನಾರ ಫಲ ಕೊಡದು ಎಂದರು.

ಪ್ರತಿಭಟನೆಯಲ್ಲಿ ದಲಿತ, ವಾಲ್ಮೀಕಿ ಸಮಾಜದ ಮುಖಂಡರಾದ ಕೃಷ್ಣದಾಸ್, ಶಿವಪ್ಪನಾಯಕ, ಮಲ್ಲಿಗೆವಾಳು ದ್ಯಾವಪ್ಪ, ವಿನೋದ್ ಕುಮಾರ್, ಇಮ್ರಾನ್, ರಂಗಸ್ವಾಮಿ, ಸುರೇಶ್, ಟಿ.ಆರ್.ವಿಜಯಕುಮಾರ್, ರಾಕೇಶ್, ನಾಗರಾಜು, ಪ್ರಸನ್ನ, ಅಶೋಕ್ ಮೊದಲಾದವರಿದ್ದರು.

## ಕನ್ನಡ ಸಾಹಿತ್ಯದ ಪರಿಚಾರಕನಾಗಿ ಸೇವೆ ಮಾಡಲು ಬೆಂಬಲಿಸಿ: ಡಾ.ಸೋಮಶೇಖರ್

# ಪರಿಷತ್ ಗತವೈಭವ ಅಸ್ಮಿತೆ ಮರುಸ್ಥಾಪನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬಾಲ್ಯದಿಂದಲೂ ತಮಗೆ ಕನ್ನಡದ ಮೇಲಿನ ಪ್ರೀತಿ ಅಗಾಧವಾಗಿದ್ದು, ಪವಿತ್ರ ಕನ್ನಡ ಭಾಷೆ, ನಾಡು,ನುಡಿ, ಸಂಸ್ಕೃತಿಯ ಉನ್ನತಿಗಾಗಿ ನಿಷ್ಕಾಮ ಸೇವೆ ಮಾಡುವುದು ನನ್ನ ಸಂಕಲ್ಪ ಎಂದು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷಿ ನಿವೃತ್ತ ಐಎಎಸ್ ಅಧಿಕಾರಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಸಿ.ಸೋಮಶೇಖರ್ ತಿಳಿಸಿದರು.




ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ನಾನು ಅಧಿಕಾರಿಯಾಗಿದ್ದಾಗಲೂ ಆಡಳಿತ, ಸಂಸ್ಕೃತಿಯನ್ನು ಜೊತೆಯಲ್ಲೇ ತೆಗೆದುಕೊಂಡು ಹೋಗಿದ್ದೇನೆ. ಇಂಥ ಕೆಲಸಕ್ಕೆ ಸಾಂಸ್ಕೃತಿಕ ಮನಸ್ಥಿತಿ ಕಟ್ಟಿಕೊಳ್ಳುವುದು ಮುಖ್ಯ ಎಂದರು.

ಆಡಳಿತ ಸೇವೆಯ ಜೊತೆಗೆ ವಚನದಲ್ಲಿ ಸಾಮಾಜಿಕ ಚಿಂತನೆ ಸೇರಿದಂತೆ ಹಲವು ಕೃತಿ ರಚನೆ ಮಾಡಿದ್ದೇನೆ, ಹತ್ತಾರು ಸಂಘ ಸಂಸ್ಥೆಗಳಲ್ಲಿ ಕೆಲಸ ಮಾಡಿದ್ದೇನೆ, ಪ್ರವೃತ್ತಿ ಮನುಷ್ಯನ ಬದುಕನ್ನು ಅರಳಿಸುವ, ವಿಕಸನಗೊಳಿಸುವ ಸಾಧನ. ನಾನು ಕನ್ನಡ ಸಾಹಿತ್ಯದ ಪರಿಚಾರಕನಾಗಿ ಸೇವೆ ಮಾಡುವ ಹಂಬಲ ಹೊಂದಿದ್ದೇನೆ ಎಂದು ತಿಳಿಸಿದರು.

> ಕನ್ನಡ ಸಾಹಿತ್ಯ ಪರಿಷತ್ತಿಗೆ ಅಧಿಕಾರಿಯಾಗಿದ್ದವರು ಅರ್ಹರು, ಅನರ್ಹರು ಎಂಬ ಪ್ರಶ್ನೆ ಮುಖ್ಯ ಅಲ್ಲ. ತಮ್ಮದೇ ರೀತಿಯಲ್ಲಿ ಕನ್ನಡದ ಮನಸ್ಸುಗಳನ್ನು ಒಟ್ಟಾಗಿ ತೆಗೆದುಕೊಂಡು ಹೋಗುವುದರ ಜೊತೆಗೆ ಕನ್ನಡದ ಅಸ್ಮಿತೆಯನ್ನು ಗಟ್ಟಿಗೊಳಿಸುವುದು ನನ್ನ ಉದ್ದೇಶ ಎಂದು ಹೇಳಿದರು.
>
> ಕನ್ನಡದ ಪ್ರಾಧಿನಿಧಿಕ ಸಂಸ್ಥೆಗೆ ಆರ್ಥಿಕ, ಭಾವನಾತ್ಮಕವಾಗಿ ಗಟ್ಟಿ ನೆಲೆ ರೂಪಿಸುವುದು ನನ್ನ ಅದಮ್ಯ ಆಸೆಯಾಗಿದೆ ಎಂದ ಅವರು, ನನ್ನ ಕನಸು ಬಹಳ ಇದ್ದು, ಅದನ್ನು ಸಾಕಾರಗೊಳಿಸುವ ಸಂಕಲ್ಪ ಶಕ್ತಿ ಇದೆ ಎಂದು ಹೇಳಿದರು.

ಇಂದು ಸಾಹಿತ್ಯ ಪರಿಷತ್ತಿಗೂ ಹೊಸ ಚಿಂತನೆ, ಆವಿಷ್ಕಾರ ಬೇಕಿದೆ. ಕನ್ನಡ ನಿತ್ಯೋತ್ಸವ ಆಗಬೇಕು ಎಂಬುದು ನನ್ನ ಹಂಬಲ ಎಂದರು.

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷನಾಗಿ ಗಡಿಭಾಗದಲ್ಲಿ ಕನ್ನಡದ ಅಸ್ಮಿತೆ ಕಾಪಾಡುವ ಕೆಲಸ ಮಾಡಿದ್ದೇನೆ. ಕನ್ನಡದ ಸೇವೆ ಮಾಡುವ ಅವಕಾಶಕ್ಕಾಗಿ ನಾನು ಸ್ಪರ್ಧೆ ಮಾಡುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದರು.

ಕರ್ನಾಟಕದಲ್ಲಿ 4 ಲಕ್ಷ ಮಂದಿ ಪರಿಷತ್ತಿನ ಸದಸ್ಯರಿದ್ದಾರೆ. ಅವರೆಲ್ಲರನ್ನು ಮುಖತಃ ಭೇಟಿ ಮಾಡುವುದು ಕಷ್ಟ ಸಾಧ್ಯ. ಹಾಗಾಗಿ ಮಾಧ್ಯಮಗಳ ಮೂಲಕ ತಮ್ಮನ್ನು ಬೆಂಬಲಿಸುವಂತೆ ಎಲ್ಲ ಗೌರವಾನ್ವಿತ ಸದಸ್ಯರಲ್ಲಿ ಮನವಿ ಮಾಡಿದರು.

ಕಸಾಪವನ್ನು ಪ್ರಗತಿ ಪಥದತ್ತ ಕೊಂಡೊಯ್ಯಲು ಪಾಲುದಾರರಾಗಬೇಕು. ಸಾಹಿತ್ಯದಲ್ಲಾಗಲೀ, ಚುನಾವಣೆಯಲ್ಲಾಗಲೀ ಜಾತಿ ಮತ್ತು ರಾಜಕೀಯ ಯಾವುದೇ ಕಾರಣಕ್ಕೂ ಬರಬಾರದು ಎಂದು ಹೇಳಿದರು.

ಸಾಹಿತ್ಯ ಸೇವೆ ಮಾಡಲು ಹಿನ್ನೆಲೆ ಬೇಕಿಲ್ಲ, ವಿವೇಕ ಸಾಕು, ಹಾಗೆಯೇ ಇಂಥವರೇ ಅಧ್ಯಕ್ಷರಾಗಬೇಕು, ಆಗಬಾರದು ಎಂಬ ಮಾನದಂಡ ವೇನೂ ಇಲ್ಲ. ಸಾಹಿತ್ಯ ಸಂಘಟಕರೂ ಅಧ್ಯಕ್ಷರಾಗಬಹುದು ಎಂದು ಪ್ರಶ್ನೆಗೆ ಉತ್ತರಿಸಿದರು.

ಯಾರೋ ಒಬ್ಬರು ತಪ್ಪು ಮಾಡಿದರೆ, ಎಲ್ಲರೂ ಹಾಗೆ ಎಂದುಕೊಳ್ಳಬಾರದು. ಈ ರೀತಿಯ ತಪ್ಪು ಕಲ್ಪನೆ ಬೇಡ. ಶುದ್ಧ, ನಿರ್ಮಲವಾಗಿ ಕನ್ನಡವನ್ನು ಕಟ್ಟಿ ಬೆಳೆಸಬೇಕು ಎಂಬುದು ನನ್ನ ಮಹದಾಸೆ ಎಂದರು.

ಜನ ಹಾಗೂ ಸಾಹಿತ್ಯದ ಪರ ಸಂವೇದನೆ ಇಟ್ಟುಕೊಂಡು ಕೆಲಸ ಮಾಡಬೇಕು. ಅತಿಮುಖ್ಯವಾಗಿ ಪರಿಷತ್ತಿಗೆ ಗತಕಾಲದ ವೈಭವ ತಂದುಕೊಡುವುದು ನನ್ನ ಪ್ರಮುಖ ಹೆಬ್ಬಯಕೆ ಎಂದರು.

ಗತಕಾಲದ ಅಸ್ಮಿತೆ ಮರುಸ್ಥಾಪನೆಯಾಗಬೇಕು. ಆ ನಿಟ್ಟಿನಲ್ಲಿ ದಕ್ಷ ಮತ್ತು ಪ್ರಾಮಾಣಿಕವಾಗಿ ಕೆಲಸ ಮಾಡುವೆ. ಪರಿಷತ್ತಿನಲ್ಲಿ ಏನೇ ತಪ್ಪು, ಲೋಪಗಳಾಗಿದ್ದರೂ ಅದನ್ನು ಶುದ್ಧಗೊಳಿಸುವ ಪ್ರಾಮಾಣಿಕ ಕೆಲಸ ಮಾಡುವೆ, ಹಾಗಾಗಿ ಪರಿಷತ್ತಿನ ಎಲ್ಲ ಮತದಾರರು ತಮ್ಮನ್ನು ಬೆಂಬಲಿಸುವ ಮೂಲಕ ಕನ್ನಡ ಸೇವೆಗೆ ಅನುವು ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಬಾಳ್ಳು ಜಗನ್ನಾಥ್, ಮರ್ಕುಲಿ ಗೋಪಾಲೇಗೌಡ, ಕಟ್ಟಾಯ ಶಿವಕುಮಾರ್, ಹಿರಿಯ ಪತ್ರಕರ್ತ ವೆಂಕಟೇಶ್, ದಿನೇಶ್, ಮುಳ್ಳಕೆರೆ ಪ್ರಕಾಶ್, ಸಾಹಿತಿ ಸುಮಾ ವೀಣಾ ಇದ್ದರು.

# ತಪ್ಪಾಗಿದ್ರೆ ಶಿಕ್ಷೆಯಾಗಲಿ: ತಪ್ಪು ಸಂದೇಶ ಬೇಡ

## ಸಂಘಟನೆ-ಸಾರ್ವಜನಿಕರಲ್ಲಿ ಖಾಸಗಿ ಆಸ್ಪತ್ರೆ-ನರ್ಸಿಂಗ್ ಹೋಮ್ಸ್ ಒಕ್ಕೂಟ ವೈದ್ಯರ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರೋಗಿಯ ಸಾವು, ಚಿಕಿತ್ಸೆಯ ಸಂಕೀರ್ಣತೆ, ಆಸ್ಪತ್ರೆ ಬಿಲ್ ಅಥವಾ ಚಿಕಿತ್ಸೆ ಕುರಿತು ತಪ್ಪುಗಳಾದಾಗ ಆಸ್ಪತ್ರೆಗಳ ಆವರಣದಲ್ಲಿ ಗುಂಪು ಸೇರುವುದು, ವೈದ್ಯರು ಹಾಗೂ ಸಿಬ್ಬಂದಿಗೆ ಬೆದರಿಕೆ ಹಾಕಿ, ಅವಾಚ್ಯ ಶಬ್ದಗಳಿಂದ ನಿಂದಿಸಿ ವೈದ್ಯಕೀಯ ಸೇವೆಗೆ ಅಡ್ಡಿಪಡಿಸುವ ಘಟನೆಗಳು ಆತಂಕ ತರಿಸಿದ್ದು, ಇವು ಮರುಕಳಿಸದಂತೆ ಸಂಬಂಧಪಟ್ಟವರು ಕ್ರಮ ಕೈಗೊಳ್ಳಬೇಕು ಎಂದು ಖಾಸಗಿ ಆಸ್ಪತ್ರೆ ಅಂಡ್ ನರ್ಸಿಂಗ್ ಹೋಮ್ಸ್ ಅಸೋಸಿಯೇಷನ್ ಅಧ್ಯಕ್ಷ ಶ್ರೀರಂಗ ಡಾಂಗೆ ಹಾಗೂ ಇತರೆ ವೈದ್ಯರು ಮನವಿ ಮಾಡಿದರು.




> ನಾವ್ಯಾರೂ ಮಾಧ್ಯಮದವರನ್ನು ದೂರುತ್ತಿಲ್ಲ. ವೈದ್ಯರು, ಸಿಬ್ಬಂದಿ ಮೇಲೆ ಹಲ್ಲೆ ಮಾಡಿದರೆ ಅಂಥವರಿಗೆ ಜಾಮೀನು ಸಿಗುವುದಿಲ್ಲ ಎಂಬ ವಿಷಯ ಜನರಿಗೆ ತಲುಪಿಸಿ ಎಂದು ಕೋರುತ್ತಿದ್ದೇವೆ. ನಮ್ಮೆಲ್ಲರ ಉದ್ದೇಶ ಸಾರ್ವಜನಿಕರ ಸೇವೆಯೇ ಆಗಿದೆ.
>
> **- ಡಾ.ಅಬ್ದುಲ್ ಬಶೀರ್, ಜನಪ್ರಿಯ ಆಸ್ಪತ್ರೆ, ಎಂಡಿ.**

ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಇದರಿಂದ ವೈದ್ಯರು ಮತ್ತು ಸಿಬ್ಬಂದಿಯ ಮಾನಸಿಕ ಸ್ಥೈರ್ಯ ಕುಗ್ಗಲಿದೆ. ಇತರೆ ರೋಗಿಗಳ ಮೇಲೂ ಪರಿಣಾಮ ಬೀರಲಿದೆ. ಕಳೆದ 1 ತಿಂಗಳ ಅವಧಿಯಲ್ಲಿ 4 ಆಸ್ಪತ್ರೆಗಳಲ್ಲಿ ಇಂಥ ಘರ್ಷಣೆ ಘಟನೆ ನಡೆದಿರುವುದು ನೋವು ತರಿಸಿದೆ. ಯಾಕಾದ್ರೂ ನಾವು ವೈದ್ಯರಾದೆವು ಎಂದು ಕಣ್ಣೀರು ಹಾಕಿದರು.

ಈ ರೀತಿಯ ಅಡಚಣೆಗಳಿಂದ ಸಂಬಂಧವೇ ಇಲ್ಲದ ಮತ್ತೊಬ್ಬ ರೋಗಿಯ ಆರೋಗ್ಯ ಹದಗೆಟ್ಟರೆ ಅಥವಾ ಜೀವಹಾನಿಯಾದರೆ ಅದರ ಹೊಣೆ ಯಾರು ಎಂದು ಪ್ರಶ್ನಿಸಿದರು. ಪ್ರತಿಯೊಬ್ಬ ವೈದ್ಯರೂ ರೋಗಿ ಜೀವ ಉಳಿಸುವ ಉದ್ದೇಶದಿಂದಲೇ ಚಿಕಿತ್ಸೆ ಆರಂಭಿಸುತ್ತಾರೆ. ಅಕಸ್ಮಾತ್ ಜೀವಹಾನಿಯಾದರೆ ನಮಗೂ ನೋವಾಗುತ್ತದೆ ಎಂದ ಅವರು, ನಾವ್ಯಾರೂ ರೋಗಿಯ ಅಥವಾ ಕುಟುಂಬದ ವಿರೋಧಿಗಳಲ್ಲ ಎಂದು ಸ್ಪಷ್ಟಪಡಿಸಿದರು.

> ಡಾ.ರಂಗಲಕ್ಷ್ಮಿ ಮಾತನಾಡಿ,ನಮಗೂ ಮನುಷ್ಯತ್ವ ಇದೆ. ನಾವು ಕೊಲೆ ಮಾಡಲು ಆಸ್ಪತ್ರೆ ಮಾಡಿಲ್ಲ ಎಂದು ಹೇಳಿದರೆ, ಡಾ.ಯತೀಶ್ ಮಾತನಾಡಿ, ತಪ್ಪು ಆಗೋದು ಸಹಜ, ಆದರೆ ಜನರಿಗೆ ತಪ್ಪು ಸಂದೇಶ ರವಾನೆ ಆಗಬಾರದು.ಯಾರೂ ಕಾನೂನು ಕೈಗೆತ್ತಿಕೊಳ್ಳಬಾರದು ಎಂದು ವಿನಂತಿಸಿದರು.

ಪ್ರತಿಯೊಂದು ಪ್ರತಿಕೂಲ ಚಿಕಿತ್ಸಾ ಫಲಿತಾಂಶವನ್ನೂ ವೈದ್ಯಕೀಯ ನಿರ್ಲಕ್ಷ್ಯ ಎಂದು ಪರಿಗಣಿಸಲು ಸಾಧ್ಯವಿಲ್ಲ. ನಿರ್ಲಕ್ಷ್ಯ ನಡೆದಿದೆಯೇ ಎಂಬುದನ್ನು ಸಾಕ್ಷ್ಯಾಧಾರ ಮತ್ತು ಕಾನೂನುಬದ್ಧ ಪ್ರಕ್ರಿಯೆ ಮೂಲಕ ನಿರ್ಧರಿಸಬೇಕೆಂದು ಮನವಿ ಮಾಡಿದರು.

ವೈದ್ಯಕೀಯ ಸೇವಾ ಸಿಬ್ಬಂದಿ ಮೇಲಿನ ಹಿಂಸಾಚಾರ ಮತ್ತು ವೈದ್ಯಕೀಯ ಸೇವಾ ಸಂಸ್ಥೆಗಳ ಆಸ್ತಿ-ಪಾಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ 2009ರ ಕಾಯ್ದೆಗೆ 2024ರಲ್ಲಿ ತಿದ್ದುಪಡಿ ಮಾಡಲಾಗಿದೆ. ಅದರಂತೆ ಬೆದರಿಕೆ ಅಥವಾ ಕರ್ತವ್ಯಕ್ಕೆ ಅಡ್ಡಿಪಡಿಸುವಂತಿಲ್ಲ. ರೋಗಿ ಕಳೆದುಕೊಂಡ ಕುಟುಂಬದ ದುಃಖಕ್ಕೆ ಸಹಾನುಭೂತಿ ಇದೆ. ನೈಜ ಆರೋಪಗಳಿದ್ದರೆ ಅವುಗಳ ಬಗ್ಗೆ ಕಾನೂನುಬದ್ಧ ತನಿಖೆಯಾಗಬೇಕು. ಆದರೆ ಬೆದರಿಕೆ, ಅಡ್ಡಿಪಡಿಸುವಿಕೆ ಮತ್ತು ಹಿಂಸಾಚಾರ ಸಲ್ಲದು ಎಂದರು.

ಚಿಕಿತ್ಸೆ ಬಗ್ಗೆ ಸಾರ್ವಜನಿಕರು ಪ್ರಶ್ನಿಸಬಹುದು, ವಿವರಣೆ ಮತ್ತು ದಾಖಲೆ ಕೇಳಬಹುದು. ಅಗತ್ಯವಿದ್ದಲ್ಲಿ ಕಾನೂನಿನಡಿ ಲಭ್ಯವಿರುವ ಪರಿಹಾರ ಮಾರ್ಗ ಅನುಸರಿಸಬಹುದು. ಆದರೆ ಗುಂಪು ಕರೆತಂದು ದುರ್ವರ್ತನೆ ತೋರಬಾರದು ಎಂದರು.

ನಿರ್ಲಕ್ಷ್ಯ ಅಥವಾ ತಪ್ಪಾಗಿದ್ದರೆ ಕಾನೂನು ಪ್ರಕರಣ ಕ್ರಮ ಜರುಗಿಸಲಿ, ಎಲ್ಲವೂ ಕಾನೂನು ಪ್ರಕಾರವೇ ಆಗಲಿ, ಬೆದರಿಕೆ ಅಥವಾ ಗುಂಪು ನ್ಯಾಯದ ಮೂಲಕವಲ್ಲ ಎಂದು ಸ್ಪಷ್ಟಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಾಸನಾಂಬ ಆಸ್ಪತ್ರೆಯ ಡಾ.ಜಿ.ಎನ್.ಬಸವರಾಜ್, ಸಂಘದ ಡಾ.ಅನೂಪ್, ಡಾ.ಸೌಮ್ಯ ದಿನೇಶ್, ಡಾ.ಪಾಲಾಕ್ಷ ಮೊದಲಾದವರಿದ್ದರು.

# ವಾಲ್ಮೀಕಿ ನಿಗಮದಿಂದ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ, ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ಉತ್ತಮ ವ್ಯಕ್ತಿತ್ವ ರೂಪಿಸುವ ಮಾರ್ಗದರ್ಶಕರಾಗಿದ್ದಾರೆ ಎಂದು ಶಾಸಕರಾದ ಸ್ವರೂಪ್ ಪ್ರಕಾಶ್‌ಅವರು ತಿಳಿಸಿದ್ದಾರೆ.

ಹಾಸನದ ಆದಿಚುಂಚನಗಿರಿ ಕಲ್ಯಾಣ ಮಂಟಪದಲ್ಲಿ ಇಂದು ಅನುದಾನ ರಹಿತ ಖಾಸಗಿ ಶಾಲೆಗಳ ಆಡಳಿತ ಮಂಡಳಿ ವತಿಯಿಂದ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದರು.

ಶಿಕ್ಷಕರ ಮಾರ್ಗದರ್ಶನದಿಂದ ಅನೇಕ ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಸಾಧನೆ ಮಾಡಿದ್ದಾರೆ, ಸಮಾಜದಲ್ಲಿ ಶಿಸ್ತು, ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಶಿಕ್ಷಕರ ಕೊಡುಗೆ ಅಪಾರವಾಗಿದೆ ಎಂದರು.

ಶಿಕ್ಷಕರು ತಮ್ಮ ವೃತ್ತಿಯನ್ನು ಸೇವಾ ಮನೋಭಾವದಿಂದ ನಿರ್ವಹಿಸುತ್ತಿರುವುದು ಶ್ಲಾಘನೀಯ, ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಎಲ್ಲರೂ ಸಹಕರಿಸಬೇಕು, ಇಂದಿನ ತಂತ್ರಜ್ಞಾನ ಯುಗದಲ್ಲಿ ಶಿಕ್ಷಣ ಕ್ಷೇತ್ರವೂ ಹಲವು ಬದಲಾವಣೆಗಳನ್ನು ಕಾಣುತ್ತಿದೆ ಎಂದರು.

ಬದಲಾಗುತ್ತಿರುವ ಕಾಲಘಟ್ಟಕ್ಕೆ ಅನುಗುಣವಾಗಿ ಶಿಕ್ಷಕರು ಹೊಸ ಬೋಧನಾ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

# ಕರುಣಾಮಯಿ ಕುಮಾರಣ್ಣ ಮಾನವೀಯತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜಕೀಯ, ಆಡಳಿತಾತ್ಮಕ ಕೆಲಸಗಳ ನಡುವೆಯೂ ತವರು ಜಿಲ್ಲೆಯ ಜನರ ಕಷ್ಟಗಳಿಗೆ ಸ್ಪಂದಿಸುವ ಮೂಲಕ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಮಾನವೀಯತೆ ಮತ್ತು ತವರು ಪ್ರೀತಿ ಮೆರೆದಿದ್ದಾರೆ.

ತಾಲೂಕಿನ ಕಟ್ಟಾಯ ಹೋಬಳಿಯ ನಾಯಕರಹಳ್ಳಿ ಗ್ರಾಮದ ಜಯರಾಮ್ ಅವರ ಪುತ್ರ, ಇಂಜಿನಿಯರಿಂಗ್ ಪದವೀಧರ ಜಯಂತ್‌ಗೌಡ ಎಂಬುವರು ದೆಹಲಿಯ ವಸತಿ ಗೃಹವೊಂದರಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಸುದ್ದಿ ಸಚಿವರ ಗಮನಕ್ಕೆ ಬಂದ ತಕ್ಷಣ ಅವರು ಸ್ಪಂದಿಸಿದ್ದಾರೆ.

ಘಟನೆಯ ಮಾಹಿತಿ ತಿಳಿದ ಕೂಡಲೇ ಮೃತ ಯುವಕನ ಕುಟುಂಬದ ಸದಸ್ಯರನ್ನು ಸಂಪರ್ಕಿಸಿದ ಕುಮಾರಸ್ವಾಮಿ ಅವರು, ದುಃಖದಲ್ಲಿದ್ದ ಕುಟುಂಬಕ್ಕೆ ನೆರವಾಗಲು ಮುಂದಾದರು.

ದೆಹಲಿಯಲ್ಲಿ ಅಗತ್ಯ ಪ್ರಕ್ರಿಯೆ ಪೂರ್ಣಗೊಳಿಸಿ, ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಮೃತದೇಹವನ್ನು ದೆಹಲಿಯಿಂದ ಅವರ ಸ್ವಗ್ರಾಮ ನಾಯಕರಹಳ್ಳಿಗೆ ಕಳುಹಿಸಿಕೊಡುವ ವ್ಯವಸ್ಥೆ ಮಾಡಲು ಸಹಕರಿಸಿದರು.

ತಮ್ಮ ಕುಟುಂಬದ ಸದಸ್ಯನನ್ನು ಕಳೆದುಕೊಂಡು ಆಘಾತದಲ್ಲಿದ್ದ ಕುಟುಂಬಕ್ಕೆ ಇಂತಹ ಸಂದರ್ಭದಲ್ಲಿ ನೆರವು ದೊರಕಿರುವುದು ದೊಡ್ಡ ಸಮಾಧಾನ ತಂದಿದೆ.

ದೂರದ ದೆಹಲಿಯಲ್ಲಿ ನಡೆದ ಘಟನೆಯಾದರೂ ತಕ್ಷಣ ಗಮನಹರಿಸಿ ಸ್ಪಂದಿಸಿದ ಸಚಿವರ ನಡೆ ಕುಟುಂಬದ ಸದಸ್ಯರು ಹಾಗೂ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿದೆ.

ಸಚಿವರ ಮಾನವೀಯ ಕಾರ್ಯವನ್ನು ಜಿಲ್ಲೆಯ ಜನರೂ ಶ್ಲಾಘಿಸಿದ್ದಾರೆ. ಅಧಿಕಾರ, ಜವಾಬ್ದಾರಿಗಳ ನಡುವೆಯೂ ತವರು ಜಿಲ್ಲೆಯ ಜನರೊಂದಿಗೆ ನಂಟು ಉಳಿಸಿಕೊಂಡು, ಸಂಕಷ್ಟದ ಸಮಯದಲ್ಲಿ ನೆರವಿಗೆ ಧಾವಿಸುವುದು ತವರು ಪ್ರೀತಿಯ ಪ್ರತೀಕ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಸಂಕಷ್ಟದಲ್ಲಿರುವ ಕುಟುಂಬಕ್ಕೆ ನೆರವಾಗುವ ಇಂತಹ ಕಾರ್ಯಗಳು ಸಾರ್ವಜನಿಕ ಜೀವನದಲ್ಲಿ ಮಾನವೀಯ ಮೌಲ್ಯಗಳ ಮಹತ್ವವನ್ನು ಸಾರುತ್ತವೆ. ಜಯಂತ್ ಗೌಡ ಅವರ ಕುಟುಂಬಕ್ಕೆ ನೆರವಾಗುವ ಮೂಲಕ ಎಚ್.ಡಿ.ಕುಮಾರಸ್ವಾಮಿ ಅವರು ಮಾನವೀಯತೆ ಹಾಗೂ ತವರು ಜಿಲ್ಲೆಯ ಜನರ ಮೇಲಿನ ಕಾಳಜಿಯನ್ನು ಮತ್ತೊಮ್ಮೆ ತೋರಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248